



ಅರುಣ ಪಿ. ಭಟ್ಟ

# ವಾರಭವಿಷ್ಯ: 13.11.2025ರಿಂದ 19.11.2025ರವರೆಗೆ





ನಿಮ್ಮ ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಸ್ವರ್ಧೆಯಲ್ಲಿ ಉತ್ತಮ ಸ್ಥಾನ ಪಡೆಯಲಿದ್ದೀರಿ. ಮಕ್ಕಳು ಯಶಸ್ಸು ಪಡೆಯಲು ಪ್ರೋತ್ಸಾಹ ನೀಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಯ ಸಮಸ್ಯೆಗಳು ಎದುರಾಗಬಹುದು. ಪ್ರತಿಸ್ಪರ್ಧಿಗಳು ನಿಮ್ಮನ್ನು ಮಣಿಸಲು ಬಹಳ ಶ್ರಮಿಸುತ್ತಾರೆ. ಉನ್ನತ ಸ್ಥಾನ ಪಡೆದುಕೊಳ್ಳುವ ಯೋಗ ಇದೆ. ಶುಭದಿನ: 16. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.

---

ಜೀವನಮಟ್ಟ ಮೇಲಕ್ಕೆ ಏರಲಿದೆ. ಮನೆಗೆ ವಿಲಾಸಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಆರೋಗ್ಯ ಉತ್ತಮ ಸ್ಥಿತಿಯಲ್ಲಿ ಇರುತ್ತದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಶುಭದಿನ: 18. ಸೌಂದರ್ಯ ಲಹರಿ ಪಠಿಸಿರಿ.




---




ಆತ್ಮವಿಶ್ವಾಸ ಹೆಚ್ಚಾಗಲಿದೆ. ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಉದ್ಯೋಗ ವ್ಯಾಪಾರದಲ್ಲಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಕುಟುಂಬಕ್ಕೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಪೋಷಕರ ಸಂತೋಷಕ್ಕಾಗಿ ಅವರ ಅಗತ್ಯಗಳನ್ನು ಪೂರೈಸಲಿದ್ದೀರಿ. ಬೌದ್ಧಿಕ ಮಟ್ಟ ಉತ್ತಮವಾಗಿರುತ್ತದೆ. ಶುಭದಿನ: 17. ಲಕ್ಷ್ಮೀನರಸಿಂಹ ಜಪ ಮಾಡಿರಿ.

---

ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸಿಕೊಳ್ಳಲಿದೆ. ವೃತ್ತಿ ಅಗತ್ಯಗಳಿಗೆ ಈ ಪ್ರಯಾಣ ಅನಿವಾರ್ಯ ಆಗಲಿದೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಸ್ಪರ್ಧಾತ್ಮಕ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಇರುವವರಿಗೆ ಕನಸಿನ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ: 14. ವಿಷ್ಣು ಸಹಸ್ರನಾಮ ಪಠಿಸಿರಿ.





---





ಉದ್ಯೋಗ ಹಾಗೂ ವ್ಯಾಪಾರದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯಗಳಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ಇತ್ತೀಚೆಗೆ ನೀವು ಅನುಭವಿಸಿದ ನಷ್ಟವನ್ನು ಮತ್ತೆ ಭರಿಸಲು ಎಲ್ಲ ಪ್ರಯತ್ನವನ್ನು ಮಾಡಲಿದ್ದೀರಿ. ಸಂಗಾತಿ ಹಾಗೂ ಮಕ್ಕಳ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು, ಕೀರ್ತಿಯನ್ನು ಪಡೆಯಲಿದ್ದೀರಿ. ಶುಭದಿನ: 19. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---

ಪೋಷಕರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಬಹಳ ಸಮಯದಿಂದ ಎದುರು ನೋಡುತ್ತಿದ್ದ ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಪ್ರೀತಿ ಪ್ರೇಮದಲ್ಲಿರುವವರು ಸಂಗಾತಿಯ ಸಿಟ್ಟನ್ನು ಸಹಿಸಬೇಕಾಗುತ್ತದೆ. ಶುಭದಿನ: 18. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




---





ಲಾಭ ಗಳಿಸುವ ಯೋಗ ಇದೆ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರಲಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಆದರೆ ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ನಿಮ್ಮ ವರ್ಚಸ್ಸಿಗೆ ಧಕ್ಕೆ ಬರಬಹುದು. ಶುಭದಿನ: 17. ಚಂಡಿ ಪಾರಾಯಣ ಮಾಡಿರಿ.

---

ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರವಾದ ಸನ್ನಿವೇಶ ಇರಲಿದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ವ್ಯಾಪಾರಿಗಳಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ನಿಮ್ಮ ಗುರಿ ತಲುಪುವ ನಿಟ್ಟಿನಲ್ಲಿ ಆಲಸ್ಯವನ್ನು ಬಿಡಬೇಕಾಗುತ್ತದೆ. ಶುಭದಿನ: 16. ದತ್ತಗುರು ಚರಿತ್ರೆ ಪಠಿಸಿರಿ.





---





ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ್ಯ ಕಲಿಯಲು ಸಾಧ್ಯವಾಗುತ್ತದೆ. ತಾತ್ಕಾಲಿಕ ಉದ್ಯೋಗ ಮಾಡುತ್ತಿರುವವರಿಗೆ ಕಾಯಂ ಆಗುವ ಯೋಗ ಇದೆ. ಸಂಗಾತಿ ಜತೆಗೆ ಸಂತೋಷವಾಗಿ ಸಮಯ ಕಳೆಯುವ ಅವಕಾಶ ಇದೆ. ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ: 18. ಲಲಿತಾ ಸಹಸ್ರನಾಮ ಪಠಿಸಿರಿ.

---

ಹೂಡಿಕೆ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಪ್ರತಿಸ್ಪರ್ಧಿಗಳು ನಿಮಗೆ ಸವಾಲೊಡ್ಡಬಹುದು. ದೊಡ್ಡ ಸಂಸ್ಥೆಗಳ ಜತೆಗೆ ವೃತ್ತಿಪರ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ಈ ಹಿಂದೆ ನೀವು ಪಟ್ಟ ಶ್ರಮಕ್ಕೆ ಈಗ ಮಾನ್ಯತೆ ದೊರೆಯಲಿದ್ದು, ದೊಡ್ಡ ಮಟ್ಟದಲ್ಲಿ ಗುರುತು ಹಾಗೂ ಮನ್ನಣೆ ದೊರೆಯಲಿದೆ. ವೃತ್ತಿಜೀವನದಲ್ಲಿ ಸಕಾರಾತ್ಮಕವಾದ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ: 19. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




---




ಸಂಗಾತಿ ಜತೆಗೆ ಸಂಬಂಧ ಗಾಢವಾಗಲಿದೆ. ಕೌಟುಂಬಿಕ ಜೀವನದಲ್ಲಿ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದ್ದೀರಿ. ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಸಂಸ್ಥೆಗಳಲ್ಲಿ ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ಶುಭದಿನ: 18. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.

---

ಸೋದರ ಸಂಬಂಧಿಗಳ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರ ಕಾರಣಗಳಿಗಾಗಿ ಪ್ರಯಾಣಗಳನ್ನು ಮಾಡಬೇಕಾಗುತ್ತದೆ. ನಿಮ್ಮ ಪ್ರಗತಿಗೆ ಅಡ್ಡಗಾಲು ಹಾಕುತ್ತಾರೆ. ಸ್ಥಿರವಾದ ಆರೋಗ್ಯ ಹಾಗೂ ದೃಢತೆ ಕಾಯ್ದುಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರಿಗೆ ಪ್ರಗತಿ ಇದೆ. ಶುಭದಿನ: 17. ಶಿವಕವಚ ಪಠಿಸಿರಿ.

